



ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ



ದಿನಾಂಕ:15-06-24 ರಂದು ಬೆಂಗಳೂರಿನಲ್ಲಿ ನಡೆದ ಬೆಂಗಳೂರು ಗ್ರಾಮಾಂತರ ಜಿಲ್ಲೆ, ರಾಮನಗರ ಜಿಲ್ಲೆ ಹಾಗೂ ಬೆಂಗಳೂರು ನಗರ ಜಿಲ್ಲೆಯ ಸರ್ಕಾರಿ ನೌಕರರ ಮಕ್ಕಳ ಪ್ರತಿಭಾ ಪುರಸ್ಕಾರ ಕಾರ್ಯಕ್ರಮವನ್ನು ಸಭಾಪತಿ ಬಸವರಾಜ್ ಹೊರಟ್ಟಿ ಅವರು ಉದ್ಘಾಟಿಸಿದರು. ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಉಪಮುಖ್ಯಮಂತ್ರಿಗಳಾದ ಡಿ.ಕೆ ಶಿವಕುಮಾರ್ ಅವರು ಪ್ರಶಸ್ತಿ ನೀಡಿ ಗೌರವಿಸಿದರು. ಇದೇ ಸಂದರ್ಭದಲ್ಲಿ ಸಭಾಪತಿಗಳನ್ನ ಹಾಗೂ ಉಪಮುಖ್ಯಮಂತ್ರಿಗಳನ್ನ ಮೂರು ಜಿಲ್ಲೆಯ ಸರಕಾರಿ ನೌಕರರ ಸಂಘಟನೆಗಳ ಪರವಾಗಿ ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ಬೆಂಗಳೂರು ನಗರ ಜಿಲ್ಲೆಯ ಜಿಲ್ಲಾಧಿಕಾರಿಗಳು ಹಾಗೂ ರಾಜ್ಯ ಸರಕಾರಿ ನೌಕರರ ಸಂಘಟನೆ ಅಧ್ಯಕ್ಷ ಷಡಕ್ಷರಿ ಅವರು ಸೇರಿದಂತೆ ಸಂಘಟನೆಯ ಪದಾಧಿಕಾರಿಗಳು ನೌಕರ ಬಾಂಧವರು ಪ್ರಶಸ್ತಿ ಪುರಸ್ಕೃತರು ಮುಂತಾದವರು ಉಪಸ್ಥಿತರಿದ್ದರು.